1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**581/2022**

ಹೆಸರುಃ ಸೈಯದ್ ಮುಸ್ತಾಫ್ ಚಾಸಾಃ 14

ತಂದೆಃ ಸೈಯದ್ ಚಮನ್ ಸಾಬ್ ಫ್ರಾಸಾ: 2

ವಯಸ್ಸುಃ 38

ಉದ್ಯೋಗಃ ಕಬ್ಬಿಣದ ಕೆಲಸ

ವಾಸ ಸ್ಥಳಃ ಚನ್ನಗಿರಿ .

ಸಾಕ್ಷಿಗೆ ದಿನಾಂಕಃ 14.08.2024 ರಂದು ಪ್ರಮಾಣ ವಚನ ಭೋಧಿಸಲಾಯಿತು .

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಅಪಘಾತವನ್ನು ನೋಡಿರುವುದಿಲ್ಲ. ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಆರೋಪಿಯನ್ನು ನಾನು ನೋಡಿರುವುದಿಲ್ಲ .

(ಈ ಹಂತದಲ್ಲಿ ಸಾಕ್ಷಿಯು ಹೇಳಿಕೆಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಹೇಳಿಕೆಯನ್ನು ನೋಡಲಾಗಿ ಸಾಕ್ಷಿಯು ಹೇಳಿಕೆಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 05.08.2021 ರಂದು ಬೆಳಗ್ಗೆ 8.40 ಗಂಟೆಗೆ ಅಂಗಡಿಯನ್ನು ಬಿಟ್ಟು ನಲ್ಲೂರು ಗ್ರಾಮಕ್ಕೆ ನನ್ನ ಬೈಕ್ ನಲ್ಲಿ ಕೆಲಸದ ನಿಮಿತ್ತ ನಾನು ಮತ್ತು ಚಾಸಾ.15 ರವರು ಹೋಗುತ್ತಿರುವಾಗ ಬೆಳಗ್ಗೆ 9.00 ಗಂಟೆ ಸುಮಾರಿಗೆ ನಲ್ಲೂರು ಗ್ರಾಮದ ಮುದಿಗೆರೆ ಕ್ರಾಸ್

ಬಳಿ ನನ್ನ ಮುಂದೆ ರಸ್ತೆಯ ಎಡಬದಿಯಲ್ಲಿ ಹೋಗುತ್ತಿದ್ದ ಬೈಕ್ ಗೆ ಟ್ರ್ಯಾಕ್ಟರ್ ಮತ್ತು ಟ್ರೈಲರ್ ಚಾಲಕನು ಮುದಿಗೆರೆ ಕ್ರಾಸ್ ನಿಂದ ಅತಿ ಜೋರಾಗಿ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ನಲ್ಲೂರು ಕಡೆ ಹೋಗುತ್ತಿದ್ದ ಬೈಕ್ ಗೆ ಅಪಘಾತಪಡಿಸಿದ್ದು ------------ ಈ ಅಪಘಾತಕ್ಕೆ ಟ್ರ್ಯಾಕ್ಟರ್ ಹಾಗೂ ಟ್ರೈಲರ್ ಚಾಲಕನ ಅತಿ ವೇಗ ಹಾಗೂ ಅಜಾಗರೂಕ ಚಾಲನೆ ಎಂದು ಈಗ ಓದಿ ಹೇಳಿ ಕೇಳಿದಂತೆ ದಿನಾಂಕಃ 07.08.2021 ರಂದು ಪೊಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ ಅಲ್ಲಗಳೆದ ಹೇಳಿಕೆಯನ್ನು ನಿಪಿ.6 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ - ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**